ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 06/02/2020

# ವಿಧಾನ ಪರಿಷತ್ ಮಾಜಿ ಸದಸ್ಯ ಜಿ.ಮಾದಪ್ಪ ನಿಧನ

ಶಿವಮೊಗ್ಗ: ಸ್ವಾತಂತ್ರ್ಯ ಹೋರಾಟಗಾರ, ಹಿರಿಯ ಸಮಾಜವಾದಿ, ವಿಧಾನ ಪರಿಷತ್ ಮಾಜಿ ಸದಸ್ಯ, ಜೆಡಿಎಸ್‌ನ ಹಿರಿಯ ಮುಖಂಡ ಜಿ. ಮಾದಪ್ಪ ಬುಧವಾರ ನಿಧನರಾದರು. ಕಳೆದ 4 ದಿನದಿಂದ ಅನಾರೋಗ್ಯಕ್ಕೆ ಒಳಗಾಗಿದ್ದ 90 ವರ್ಷದ ಮಾದಪ್ಪ ಅವರನ್ನು ಮಣಿಪಾಲ್ ಆಸ್ಪತ್ರೆಗೆ ಸೇರಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ. ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ. ಫೆ.6ರಂದು ಮಧ್ಯಾಹ್ನ 2 ಕ್ಕೆ ಹುಟ್ಟೂರಾದ ಹೊನ್ನಾಳಿ ತಾಲೂಕಿನ ಯರಹಳ್ಳಿಯಲ್ಲಿ ಅಂತ್ಯಸಂಸ್ಕಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಸಮಾಜವಾದಿ ಸಿದ್ಧಾಂತ ಅಳವಡಿಸಿಕೊಂಡಿದ್ದ ಜಿ.ಮಾದಪ್ಪ ಅನೇಕ ಹೋರಾಟಗಳಲ್ಲಿ ಭಾಗವಹಿಸಿದ್ದರು. ಮಾಜಿ ಸಿಎಂ ದಿ.ಜೆ.ಎಚ್.ಪಟೇಲರ ಒಡನಾಡಿಯಾಗಿದ್ದ ಅವರು ನಂತರದ ದಿನಗಳಲ್ಲಿ ಜೆಡಿಎಸ್ ಸೇರಿದ್ದರು. ಎರಡು ಅವಧಿಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರಾಗಿಯೂ ಕಾರ್ಯ ನಿರ್ವಹಿಸಿದ್ದಾರೆ. ಪ್ರಥಮ ಬಾರಿಗೆ ನಡೆದ ಚುನಾವಣೆಯಲ್ಲಿ ಪರಿಷತ್ತಿಗೆ ಆಯ್ಕೆಯಾಗಿದ್ದರು.

